ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:02:ಯೋಜನೆ:ಸಂಜೆ ಕಾಲೇಜು:2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:24-08-2021

## ಚಾಲನಾ ಆದೇಶ

ವಿಷಯ: 2021-22ನೇ ಸಾಲಿನ ಸಂಧ್ಯಾ ಶಕ್ತಿ ಯೋಜನೆಯಡಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಸಂಜೆ ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಇಡಿ/88/ಹೆಚ್‌ಪಿಸಿ/2021, ದಿ:24.08.2021

--*--

2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 110 ರಲ್ಲಿನ ಘೋಷಣೆಯಂತೆ ರಾಜ್ಯದ 11 ನಗರ ಪಾಲಿಕೆ ವ್ಯಾಪ್ತಿಯಲ್ಲಿನ 11 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ ಅಸ್ತಿತ್ವದಲ್ಲಿರುವ ಮೂಲಸೌಕರ್ಯಗಳನ್ನು ಉಪಯೋಗಿಸಿಕೊಂಡು ವಿದ್ಯಾರ್ಥಿಗಳು ಅತಿ ಹೆಚ್ಚಾಗಿ ಆಯ್ಕೆ ಮಾಡಿಕೊಳ್ಳುವ ಹಾಗೂ ಉತ್ತಮ ಉದ್ಯೋಗಾವಕಾಶಗಳಗೆ ಹೆಚ್ಚಿನ ಸಂಖ್ಯೆಯಲ್ಲಿ ಎಡೆ ಮಾಡಿಕೊಡುವ ಬಿ.ಕಾಂ ಮತ್ತು ಬಿಸಿಎ ಕೋರ್ಸುಗಳೊಂದಿಗೆ ಸರ್ಕಾರಿ ಪ್ರಥಮ ದರ್ಜೆ ಸಂಜೆ ಕಾಲೇಜುಗಳನ್ನು ಪ್ರಾರಂಭಿಸಲು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ಅನುಮೋದನೆ ನೀಡಲಾಗಿದೆ ಮತ್ತು ಕಾಲೇಜಿಗೆ ಅಗತ್ಯವಿರುವ ಹುದ್ದೆಗಳ ಸೃಜನೆಗೆ ಸರ್ಕಾರಕ್ಕೆ ಪ್ರತ್ಯೇಕ ಪ್ರಸ್ತಾವನೆ ಸಲ್ಲಿಸಲು ಆದೇಶಿಸಲಾಗಿದೆ. ಆದುದರಿಂದ ಉಲ್ಲೇಖಿತ ಸರ್ಕಾರಿ ಆದೇಶದ ಪ್ರತಿಯನ್ನು ಈ ಮೂಲಕ ಕಳುಹಿಸುತ್ತಾ ಅಗತ್ಯಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ,

1. ಮ್ಯಾನೇಜರ್/ಅಧೀಕ್ಷಕರು, ತಾಂತ್ರಿಕ ಕೋಶ, ಕೇಂದ್ರ ಕಛೇರಿ, ಬೆಂಗಳೂರು
2. ಮ್ಯಾನೇಜರ್/ಅಧೀಕ್ಷಕರು, ವರ್ಗಾವಣೆ&ನಿಯೋಜನೆವಿಭಾಗ, ಕೇಂದ್ರ ಕಛೇರಿ, ಬೆಂಗಳೂರು
3. ಮ್ಯಾನೇಜರ್/ಅಧೀಕ್ಷಕರು, ನೇಮಕಾತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು
4. ಮ್ಯಾನೇಜರ್/ಅಧೀಕ್ಷಕರು, ಆಯವ್ಯಯ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು .
5. ಮ್ಯಾನೇಜರ್/ಅಧೀಕ್ಷಕರು, ಶೈಕ್ಷಣಿಕ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು

ಪ್ರತಿ ರವಾನೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಕಟ್ಟಡ, ಬೆಂಗಳೂರು.
2. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳ ಆಪ್ತ ಸಹಾಯಕರುಗಳಿಗೆ.
4. ಸಂಬಂಧಿಸಿದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು.
5. ಕೇಂದ್ರ ಕಛೇರಿಯ ಎಲ್ಲಾ ವಿಭಾಗಗಳ ಮ್ಯಾನೇಜರ್‌ಗಳು/ಅಧೀಕ್ಷಕರುಗಳಿಗೆ.

plan_02_2021-22_11 evening colg proposal.docx

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2021-22ನೇ ಸಾಲಿನ ಸಂಧ್ಯಾ ಶಕ್ತಿ ಯೋಜನೆಯಡಿಯಲ್ಲಿ ಸರ್ಕಾರಿ ಪ್ರಥಮ ದರ್ಜೆ "ಸಂಜೆ ಕಾಲೇಜು"ಗಳನ್ನು ಪ್ರಾರಂಭಿಸುವ ಬಗ್ಗೆ.

ಓದಲಾಗಿದೆ (1) 2021-22 ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆ ಕಂಡಿಕೆ-110.

(2) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರ ಪ್ರಸ್ತಾವನೆ: ಕಾಶಿಇ/02/ಯೋಜನೆ/ಸಂಜೆಕಾಲೇಜು/2021-22, ದಿನಾಂಕ: 11/06/2021.

(3) ಯೋಜನಾ ಇಲಾಖೆ ಟಿಪ್ಪಣಿ ಸಂಖ್ಯೆ: PDS/48/MED/2021, ದಿನಾಂಕ: 15/07/2021

(4) ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 310 ವೆಚ್ಚ-8/2021, ದಿನಾಂಕ: 4/8/2021.

ಪ್ರಸ್ತಾವನೆ:

ಮೇಲೆ ಕ್ರಮಾಂಕ (1)ರಲ್ಲಿ ಓದಲಾದ 2021-22 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ: 110 ರಲ್ಲಿ "ರಾಜ್ಯದ ಆಯ್ದ ಮಹಾನಗರ ಪಾಲಿಕೆಗಳಲ್ಲಿ ಪ್ರಾಯೋಗಿಕವಾಗಿ ಸಂಜೆ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ.

ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ದಿನಾಂಕ: 14/06/2021ರ ಪ್ರಸ್ತಾವನೆಯಲ್ಲಿ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ರವರು 2021-22 ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆ ಸಂಖ್ಯೆ: 110 ರಲ್ಲಿ "ರಾಜ್ಯದ ಆಯ್ದ ಮಹಾನಗರ ಪಾಲಿಕೆಗಳಲ್ಲಿ ಪ್ರಾಯೋಗಿಕವಾಗಿ "ಸಂಜೆ ಕಾಲೇಜು"ಗಳನ್ನು ಪ್ರಾರಂಭಿಸಲಾಗುವುದು" ಎಂದು ಘೋಷಿಸಲಾದ ಹಿನ್ನಲೆಯಲ್ಲಿ, ರಾಜ್ಯದ 11 ನಗರಪಾಲಿಕೆ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಪ್ರಸ್ತುತ ಅಸ್ತಿತ್ವದಲ್ಲಿರುವ ಮೂಲ ಸೌಕರ್ಯಗಳನ್ನು ಉಪಯೋಗಿಸಿಕೊಂಡು, ವಿದ್ಯಾರ್ಥಿಗಳು ಅತಿ ಹೆಚ್ಚಾಗಿ ಆಯ್ಕೆ ಮಾಡಿಕೊಳ್ಳುವ ಹಾಗೂ ಉತ್ತಮ ಉದ್ಯೋಗಾವಕಾಶಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಅವಕಾಶ ಕಲ್ಪಿಸುವ ಕೋರ್ಸುಗಳಾದ, ಬಿ.ಕಾಂ ಮತ್ತು ಬಿ.ಸಿ.ಎ ಗಳನ್ನು "ಸಂಧ್ಯಾ ಶಕ್ತಿ" ಯೋಜನೆಯಡಿ ಸರ್ಕಾರಿ ಪ್ರಥಮ ದರ್ಜೆ ಸಂಜೆ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದ್ದು, ಅದರಂತೆ ರಾಜ್ಯದ 11 ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ 11 ಸರ್ಕಾರಿ ಪ್ರಥಮ ದರ್ಜೆ ಸಂಜೆ ಕಾಲೇಜುಗಳನ್ನು ಈ ಕೆಳಕಂಡ ಕಾಲೇಜುಗಳಲ್ಲಿ ಪ್ರಾರಂಭಿಸಲು ಪ್ರಸ್ತಾಪಿಸಿರುತ್ತಾರೆ.

| ಕ್ರ.ಸಂ | ನಗರ ಪಾಲಿಕೆಗಳು | ಸಂಜೆ ಕಾಲೇಜು ಸ್ಥಾಪನೆಗೆ ಆಯ್ಕೆಯಾದ ಸ.ಪ್ರ.ದ.ಕಾಲೇಜುಗಳ ಹೆಸರು |
|---|---|---|
| 1. | ಬೆಂಗಳೂರು | ಸರ್ಕಾರಿ ಆರ್.ಸಿ. ಕಾಲೇಜು. |
| 2. | ಬೆಳಗಾವಿ | ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು. |
| 3. | ತುಮಕೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬಿ.ಹೆಚ್. ರಸ್ತೆ, ತುಮಕೂರು |
| 4 | ಮೈಸೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕುವೆಂಪುನಗರ ಮೈಸೂರು |
| 5 | ಶಿವಮೊಗ್ಗ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶಿವಮೊಗ್ಗ |
| 6 | ದಾವಣಗೆರೆ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಎಂ.ಸಿ.ಸಿ.ಬ್ಲಾಕ್ ದಾವಣಗೆರೆ. |

ಆಪ್ತಶಾಖೆ
601
26/8/2021

Scanned with CamScanner

| | | |
|---|---|---|
| 7 | ಮಂಗಳೂರು | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ರಥಬೀದಿ, ಮಂಗಳೂರು. |
| 8 | ಧಾರವಾಡ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕುಮಾರೇಶ್ವರನಗರ, ಧಾರವಾಡ |
| 9 | ಬಿಜಾಪುರ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ನವಬಾಗ್ ಖಾಜಾ ಕಾಲೋನಿ, ಬಿಜಾಪುರ. |
| 10 | ಗುಲ್ಬರ್ಗಾ | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸೇಡಂ ರಸ್ತೆ, ಗುಲ್ಬರ್ಗಾ |
| 11 | ಬಳ್ಳಾರಿ | ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಳ್ಳಾರಿ. |

ಹಾಗೂ ಪ್ರಸ್ತಾಪಿಸಿರುವ ಸರ್ಕಾರಿ ಸಂಜೆ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬಿ.ಸಿ.ಎ ಮತ್ತು ಬಿ.ಕಾಂ ಕೋರ್ಸ್ ಗಳನ್ನು ಪ್ರಾರಂಭಿಸಲು ಈ ಕೆಳಕಂಡ ಸಿಬ್ಬಂದಿಯೊಂದಿಗೆ, ವೇತನಕ್ಕಾಗಿ ಅನುದಾನ ಒದಗಿಸುವಂತೆ ಕೋರಿರುತ್ತಾರೆ.

| ಸಿಬ್ಬಂದಿ ವಿವರ | ಪ್ರತಿ ಸಂಜೆ ಪ್ರಥಮ ದರ್ಜೆ ಕಾಲೇಜಿನಲ್ಲಿ ಅಗತ್ಯವಿರುವ ಸಿಬ್ಬಂದಿಯ ಸಂಖ್ಯೆ | ಪ್ರತಿ ಸಂಜೆ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರತಿ ತಿಂಗಳು ಪಾವತಿಸುವ ವೇತನ | ಪ್ರತಿ ಸಂಜೆ ಪ್ರಥಮ ದರ್ಜೆ ಕಾಲೇಜಿನಲ್ಲಿ ಒಂದು ವರ್ಷಕ್ಕೆ ಬೇಕಾದ ಸಿಬ್ಬಂದಿ ವೇತನ |
|---|---|---|---|
| ಪ್ರಾಂಶುಪಾಲರು | 1 | ಪ್ರಸ್ತುತ ಸ.ಪ್ರ.ದ.ಕಾಲೇಜಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹಿರಿಯ ಅಧ್ಯಾಪಕರು | |
| ಬೋಧಕರು | 7 | ರೂ. 26,000/- ದರದಲ್ಲಿ ಒಟ್ಟು ರೂ 1,82,000/- | 21,84,000/- |
| ಆಡಳಿತ ಸಿಬ್ಬಂದಿ<br>ಕಛೇರಿ ಸಿಬ್ಬಂದಿ- 1<br>ಡಾಟಾಎಂಟ್ರಿ ಆಪರೇಟರ್ -1 | 2 | ರೂ. 21,000/- ದರದಲ್ಲಿ ಒಟ್ಟು 02 ಜನರಿಗೆ ಒಟ್ಟು ರೂ. 42,000/- | 5,04,000/- |
| ಗ್ರೂಪ್ 'ಡಿ' | 3 | ರೂ. 18,000/- ದರದಲ್ಲಿ ಒಟ್ಟು 03 ಜನರಿಗೆ ಒಟ್ಟು ರೂ. 54,000/- | 6,48,000/- |
| ಒಟ್ಟು | 13 | | 33,36,000/- |
| ಪ್ರತಿ ವರ್ಷ ಬೇಕಾಗುವ ಹೆಚ್ಚುವರಿ ಅಂದಾಜು ವೆಚ್ಚ | | | 24,00,000/- |
| ಪ್ರತಿ ಕಾಲೇಜಿಗೆ ಒಂದು ವರ್ಷಕ್ಕೆ ತಗುಲುವ ಒಟ್ಟು ಅಂದಾಜು ವೆಚ್ಚ | | | 57,36,000/- |
| 11 ಸಂಜೆ ಪ್ರಥಮ ದರ್ಜೆ ಕಾಲೇಜುಗಳಿಗೆ ಒಂದು ವರ್ಷಕ್ಕೆ ತಗುಲುವ ಅಂದಾಜು ವೆಚ್ಚ | | | 6,30,96,000/- |

Scanned with CamScanner

ಸರ್ಕಾರವು ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ ಯೋಜನಾ ಇಲಾಖೆಯ ಸಹಮತಿಯನ್ನು ಕೋರಲಾಗಿದ್ದು ಯೋಜನಾ ಇಲಾಖೆಯು ಮೇಲೆ ಕ್ರಮಾಂಕ (3)ರ ಟಿಪ್ಪಣಿಯಲ್ಲಿ ಹೊಸ ಸಂಜೆ ಪ್ರಥಮ ದರ್ಜೆ ಕಾಲೇಜುಗಳಿಗೆ ಅವಶ್ಯಕತೆ ಇರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯ ನೇಮಕಾತಿಗೆ ಆರ್ಥಿಕ ಇಲಾಖೆಯ ಅನುಮೋದನೆ ಪಡೆದು, ಇದಕ್ಕೆ ತಗಲುವ ಆವರ್ತಕ ವೆಚ್ಚವನ್ನು ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿ ನಿಯಮಾನುಸಾರ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟು ಸಹಮತಿ ನೀಡಿದೆ.

ಅದರಂತೆ, ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿದ್ದು, ಆರ್ಥಿಕ ಇಲಾಖೆಯು ಮೇಲೆ ಕ್ರಮಾಂಕ (4)ರ ಟಿಪ್ಪಣಿಯಲ್ಲಿ 2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 110ರಲ್ಲಿ ರಾಜ್ಯದ ಆಯ್ದ ಮಹಾನಗರ ಪಾಲಿಕೆಗಳಲ್ಲಿ ಪ್ರಾಯೋಗಿಕವಾಗಿ ಸಂಜೆ ಕಾಲೇಜುಗಳನ್ನು ಪ್ರಾರಂಭಿಸುವ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಆಡಳಿತಾತ್ಮಕ ಅನುಮೋದನೆ ನೀಡಲು ಸಹಮತಿ ನೀಡಿ, ಈ ಸಂಬಂಧ ಅಗತ್ಯವಿರುವ ಹುದ್ದೆಗಳ ಸೃಜನೆಗೆ ಸಂಬಂಧಿಸಿದಂತೆ, ಪ್ರತ್ಯೇಕವಾಗಿ ಪ್ರಸ್ತಾವನೆಯನ್ನು ಸಲ್ಲಿಸುವಂತೆ ತಿಳಿಸಿದೆ.

ರಾಜ್ಯದ 11 ನಗರಪಾಲಿಕೆ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಪ್ರಸ್ತುತ ಅಸ್ತಿತ್ವದಲ್ಲಿರುವ ಮೂಲ ಸೌಕರ್ಯಗಳನ್ನು ಉಪಯೋಗಿಸಿಕೊಂಡು ಸರ್ಕಾರಿ ಸಂಜೆ ಪ್ರಥಮ ದರ್ಜೆ ಕಾಲೇಜುಗಳನ್ನು ತೆರೆಯಲು ನಿರ್ಧರಿಸಲಾಗಿದೆ. ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಇಡಿ 88 ಹೆಚ್ ಪಿಸಿ 2021, ಬೆಂಗಳೂರು,</u>**

**<u>ದಿನಾಂಕ: 24/08/2021.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ, 2021-22 ನೇ ಸಾಲಿನ ಅಯವ್ಯಯ ಭಾಷಣದ ಕಂಡಿಕೆ-110ರಲ್ಲಿನ ಘೋಷಣೆಯಂತೆ ರಾಜ್ಯದ 11 ನಗರಪಾಲಿಕೆ ವ್ಯಾಪ್ತಿಯಲ್ಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ 11 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಪ್ರಸ್ತುತ ಅಸ್ತಿತ್ವದಲ್ಲಿರುವ ಮೂಲ ಸೌಕರ್ಯಗಳನ್ನು ಉಪಯೋಗಿಸಿಕೊಂಡು ವಿದ್ಯಾರ್ಥಿಗಳು ಅತಿ ಹೆಚ್ಚಾಗಿ ಆಯ್ಕೆ ಮಾಡಿಕೊಳ್ಳುವ ಹಾಗೂ ಉತ್ತಮ ಉದ್ಯೋಗಾವಕಾಶಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಎಡೆ ಮಾಡಿಕೊಡುವ ಕೋರ್ಸುಗಳಾದ ಬಿ.ಕಾಂ ಮತ್ತು ಬಿ.ಸಿ.ಎ ಗಳನ್ನು "ಸಂಧ್ಯಾ ಶಕ್ತಿ" ಯೋಜನೆಯಡಿ ಸರ್ಕಾರಿ ಪ್ರಥಮ ದರ್ಜೆ ಸಂಜೆ ಕಾಲೇಜುಗಳನ್ನು ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

<u>ಷರತ್ತುಗಳು:</u>

1. ಅಗತ್ಯವಿರುವ ಹುದ್ದೆಗಳ ಸೃಜನೆಗೆ ಸಂಬಂಧಿಸಿದಂತೆ ಪ್ರತ್ಯೇಕವಾದ ಪ್ರಸ್ತಾವನೆಯನ್ನು ಸಲ್ಲಿಸುವುದು.
2. ಇದಕ್ಕೆ ತಗಲುವ ಆವರ್ತಕ ವೆಚ್ಚವನ್ನು ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿ ನಿಯಮಾನುಸಾರ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವುದು.

Scanned with CamScanner

ಈ ಆದೇಶವನ್ನು ಯೋಜನಾ ಇಲಾಖೆ ಟಿಪ್ಪಣಿ ಸಂಖ್ಯೆ: PDS/48/MED/2021, ದಿನಾಂಕ: 15/07/2021 ಮತ್ತು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 310 ವೆಚ್ಚ-8/2021, ದಿನಾಂಕ: 4/8/2021ರಲ್ಲಿ ನೀಡಲಾಗಿರುವ ಸಹಮತಿಯಂತೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

24/8/2021

(ಟಿ.ಸಿ.ಕಾಂತರಾಜ್)
ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ.(ಯೋಜನೆ)

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (ಲೆಕ್ಕಪತ್ರಗಳು ಮತ್ತು ಹಕ್ಕುಗಳು) / (ಜಿ.ಎಸ್.ಎಸ್.ಎ) / (ಇ.ಆರ್.ಎಸ್.ಎ) ಕರ್ನಾಟಕ, ರೆಸಿಡೆನ್ಸಿ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329/5369, ಬೆಂಗಳೂರು-1 (3 ಪ್ರತಿಗಳು)
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,
3. ಸರ್ಕಾರದ ಜಂಟಿ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ) ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ) ಬೆಂಗಳೂರು.
5. ನಿರ್ದೇಶಕರು/ಲೆಕ್ಕಾಧಿಕಾರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಡಾ: ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು.
7. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಉಪ-ನಿರ್ದೇಶಕರು, ಖಜಾನೆ ಗಣಕ ಕೇಂದ್ರ, ನಂ: 49, ಖನಿಜ ಭವನ, ಬೆಂಗಳೂರು.
9. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ, ವಿಕಾಸ ಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ,
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ,
12. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನಾ ಇಲಾಖೆ,
13. ಹೆಚ್ಚಿನ ಪ್ರತಿ/ರಕ್ಷಾ ಕಡತ/ಕಛೇರಿ ಪ್ರತಿ

Scanned with CamScanner